ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್,ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಿಯು-01/ಪರೀಕ್ಷೆ/ಮೂಪಫ/2016-17 ದಿನಾಂಕ 27-07-2016.

**ಸು ತ್ತೋ ಲೆ**

ವಿಷಯ: 2016ರ ಜುಲೈ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

* * *

2016ರ ಜುಲೈ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ: 27-07-2016 ರ ಮಧ್ಯಾಹ್ನ 3-00 ಗಂಟೆಗೆ ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು. ಮತ್ತು ದಿನಾಂಕ 28-07-2016ರಂದು ಬೆಳಗ್ಗೆ 11-00 ಗಂಟೆಗೆ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಕಟಿಸಲಾಗುವುದು. ಪ್ರಕಟಗೊಂಡಿರುವ ಫಲಿತಾಂಶದಲ್ಲಿ ವ್ಯತ್ಯಾಸವಿದ್ದಲ್ಲಿ ಈ ಬಗ್ಗೆ ಖಚಿತ ಪಡಿಸಿಕೊಳ್ಳಲು ಈ ಕೆಳಕಂಡ ಪದ್ಧತಿಯನ್ನು ಜಾರಿಗೊಳಿಸಲಾಗಿದೆ.

2016ರ ಜುಲೈ ಪೂರಕ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನಿಂಗ್ ಪ್ರತಿ ಪಡೆಯಲು ಮತ್ತು ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ನಿಗದಿತ ಶುಲ್ಕಗಳನ್ನು State Bank of Mysore, Vijyay Bank ಮತ್ತು Corporation Bank. ಈ ಮೂರು ಬ್ಯಾಂಕ್‌ಗಳಲ್ಲಿ ಮಾತ್ರ **Online** ನಲ್ಲಿ ಚಲನ್ ಮೂಲಕ ಹಣ ಪಾವತಿಸಬಹುದು.

**I ಉತ್ತರ ಪತ್ರಿಕೆಯ ಸ್ಕ್ಯಾನಿಂಗ್ ಪ್ರತಿ :**

1 ಉತ್ತರ ಪತ್ರಿಕೆಯ **ಸ್ಕ್ಯಾನಿಂಗ್** ಪ್ರತಿಗಾಗಿ ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕ **02-08-2016**

2 ಸ್ಕ್ಯಾನಿಂಗ್ ಪ್ರತಿ ಪಡೆಯಲು ಶುಲ್ಕ ಪ್ರತಿ ವಿಷಯಕ್ಕೆ ₹.400-00

**II ಉತ್ತರ ಪತ್ರಿಕೆಯ ಮರುಮೌಲ್ಯಮಾಪನ :**

1. ಉತ್ತರ ಪತ್ರಿಕೆಗಳ ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಸ್ಕ್ಯಾನಿಂಗ್ ಪ್ರತಿ ಪಡೆಯುವುದು ಕಡ್ಡಾಯವಾಗಿರುತ್ತದೆ.
2. ಮರುಮೌಲ್ಯಮಾಪನಕ್ಕೆ ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕ **06-08-2016**
3. ಮರುಮೌಲ್ಯಮಾಪನದ ಶುಲ್ಕ – ಪ್ರತಿ ವಿಷಯಕ್ಕೆ **₹.1260-00**
4. ಮರುಮೌಲ್ಯಮಾಪನದಲ್ಲಿ ನಿಗಧಿಪಡಿಸಿರುವ ಅಂಕಗಳಿಗಿಂತ ಹೆಚ್ಚಿನ ಅಂಕಗಳು ಅಥವಾ **ಕಡಿಮೆ ಅಂಕಗಳು ಬಂದಲ್ಲಿ** ಅಂಕಗಳೊಂದಿಗೆ ಫಲಿತಾಂಶವನ್ನು ಪರಿಷ್ಕರಿಸಿ ಪ್ರಕಟಿಸಲಾಗುವುದು. 'Karnataka Pre-University course State Level Public Examination Rules-1997, 29 (C) ಅನ್ವಯ ವಿದ್ಯಾರ್ಥಿಗೆ ಈ ಮೊದಲು ಪಡೆದ ಅಂಕಗಳನ್ನು ಮರು ಸ್ಥಾಪಿಸಲು ಅವಕಾಶವಿರುವುದಿಲ್ಲ
5. ಮರುಮೌಲ್ಯಮಾಪನದ ಬಗ್ಗೆ ಮರುಮೌಲ್ಯಮಾಪಕರು ತೆಗೆದುಕೊಂಡ ನಿರ್ಧಾರವೇ ಅಂತಿಮ. ಇದರ ಮೇಲೆ ಮರು ಪರಿಶೀಲನೆ ಅಥವಾ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ.
6. ಮರು ಮೌಲ್ಯಮಾಪನದ ಫಲಿತಾಂಶವನ್ನು ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.
7. ವಿದ್ಯಾರ್ಥಿಗಳು ನಿಗಧಿತ ಬ್ಯಾಂಕ್‌ಗಳಲ್ಲಿ ಹಣ ಸಂದಾಯ ಮಾಡಿದ ನಂತರ Pue Challan copy ಯನ್ನು ನಮೂದಿಸಿದ e-mail ID challanupload.july2016@gmail.com ಕಳುಹಿಸತಕ್ಕದ್ದು.

**III ಅಂಕಗಳ ಮರುಎಣಿಕೆ :**

1 ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಸ್ಕ್ಯಾನಿಂಗ್ ಪ್ರತಿ ಪಡೆಯುವುದು ಕಡ್ಡಾಯವಾಗಿರುತ್ತದೆ.

2 ಅಂಕಗಳ ಮರುಎಣಿಕೆಗೆ ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕ 06-08-2016

3 ಅಂಕಗಳ ಮರುಎಣಿಕೆಗೆ ಯಾವುದೇ ಶುಲ್ಕ ಇರುವುದಿಲ್ಲ.

**ವಿಶೇಷ ಸೂಚನೆ: –**

1. 2016ರ ಜುಲೈ ಪೂರಕ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳ ಉತ್ತೀರ್ಣ ಪ್ರಮಾಣ ಪತ್ರಗಳನ್ನು ಆಯಾ ಕಾಲೇಜುಗಳಿಗೆ ಮರು ಮೌಲ್ಯಮಾಪನ ಮತ್ತು ಮರು ಎಣಿಕೆ ಕಾರ್ಯ ಪೂರ್ಣಗೊಂಡ ನಂತರ ಕಳುಹಿಸಿಕೊಡಲಾಗುವುದು.
2. 2017ರ ಮಾರ್ಚ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಹಾಜರಾಗುವ ಪುನರಾವರ್ತಿತ ಅಭ್ಯರ್ಥಿಗಳು ಮತ್ತು ಉತ್ತೀರ್ಣ ಹಾಗೂ ಅನುತ್ತೀರ್ಣ ವಿದ್ಯಾರ್ಥಿಗಳು ಫಲಿತಾಂಶ ತಿರಸ್ಕರಿಸಿ ಪುನಃ ಪರೀಕ್ಷೆಗೆ ಹಾಜರಾಗಲು ಶುಲ್ಕಗಳನ್ನು ಸಂದಾಯ ಮಾಡುವ ಬಗ್ಗೆ ವಿವರಗಳನ್ನು ನಂತರ ತಿಳಿಸಲಾಗುವುದು.

ನಿರ್ದೇಶಕರು

ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಯನ್ನು:**

1. ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಚಾರ್ಯರಿಗೆ.
3. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ; ಪಪೂಶಿಇ. (ಅಂತರ್ ಜಾಲದಲ್ಲಿ ಪ್ರಕಟಿಸಲು).
4. ಹೆಚ್ಚುವರಿ ಮತ್ತು ಕಛೇರಿ ಪ್ರತಿ.